## ಪಶ್ಚಿಮ ವಲಯ ವ್ಯಾಪ್ತಿಯ, ಮಲ್ಲೇಶ್ವರಂ ಉಪವಿಭಾಗದ ಗಾಯತ್ರಿನಗರ ವಾರ್ಡ್-76ರಲ್ಲಿ ದಿನಾಂಕ: 05-01-2022 ರಂದು ನಡೆದ ವಾರ್ಡ್ ಸಮಿತಿ ಸಭೆಯ

### ಸಭಾ ನಡವಳಿಗಳು.

ವಾರ್ಡ್ ಸಂಖ್ಯೆ-76 ಗಾಯತ್ರಿನಗರ ಸಮಯ ಮಧ್ಯಾಹ್ನ ಘಂಟೆಗೆ

ದಿನಾಂಕ: 05-01-2022 ರಂದು ವಾರ್ಡ್ ಸಂಖ್ಯೆ: 76ರ ಜನವರಿ ಮಾಹೆಯ ವಾರ್ಡ್ ಸಮಿತಿ ಸಭೆಯು ನಡೆಯಿತು. ಸದರಿ ಸಭೆಯಲ್ಲಿ ವಾರ್ಡ್ ಸಮಿತಿ ಅಧ್ಯಕ್ಷರು, ಸದಸ್ಯರು, ಅಧಿಕಾರಿಗಳು ಹಾಗೂ ಸಾರ್ವಜನಿಕರು ಭಾಗವಹಿಸಿದ್ದರು. ವಾರ್ಡ್ ಸಂಖ್ಯೆ: 76ರ ಸಹಾಯಕ ಅಭಿಯಂತರರು ಕಾರ್ಯದರ್ಶಿಗಳು ಸಭೆಯಲ್ಲಿ ಹಾಜರಿದ್ದ ಎಲ್ಲರಿಗೂ ಸ್ವಾಗತವನ್ನು ಕೋರಿದರು ಹಾಗೂ ಸದಸ್ಯರುಗಳೆಲ್ಲರ ಕಿರು ವಿವರ ತಿಳಿಸಿ, ಮಾಸ್ಕ್ ಧರಿಸಿ ಸಾಮಾಜಿಕ ಅಂತರ ಕಾಯ್ದುಯಕೊಂಡು ಸಭೆ ನಡೆಸಲು ಕೋರಿದರು.

**ಸಭೆಗೆ ಹಾಜರಿದ್ದವರು :**

| | |
|---|---|
| 1 | ಶ್ರೀ ಚಂದ್ರಶೇಖರ್. ಹೆಚ್.ಆರ್, ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಗಳು ವಾರ್ಡ್-76 ಗಾಯತ್ರಿನಗರ |
| 2 | ಶ್ರೀ ಚಿಕ್ಕಗೂಳಿಗೌಡ.ಜೆ.ಜಿ, ಸಹಾಯಕ ಅಭಿಯಂತರರು, ವಾರ್ಡ್-76 ಗಾಯತ್ರಿನಗರ ಹಾಗೂ ಕಾರ್ಯದರ್ಶಿ |
| 3 | ಶ್ರೀ ಕನಕರಾಜು, ಕಂದಾಯ ಪರಿವೀಕ್ಷಕರು |
| 4 | ಶ್ರೀ ರವಿ, ಮೌಲ್ಯಮಾಪಕರು |
| 5 | ಶ್ರೀಮತಿ ಶಾರದಾ ಬಾಯಿ, |
| 6 | ಡಾ॥ ಅಂಜನಾ, ಆರೋಗ್ಯ ಅಧಿಕಾರಿ |
| 7 | ಶ್ರೀ ಆರ್.ಸಂತೋಷ್, ಕೆಲಸ ಪರಿವೀಕ್ಷಕರು |
| 8 | ಶ್ರೀ ಮಂಜುನಾಥ್, ವಾರ್ಡ್ ವೆಲ್‌ಫೇರ್ ಕಮಿಟಿ ಸದಸ್ಯರು |
| 9 | ಶ್ರೀಮತಿ ಕೃಪಾ ಪ್ರಕಾಶ್, ವಾರ್ಡ್ ವೆಲ್‌ಫೇರ್ ಕಮಿಟಿ ಸದಸ್ಯರು |
| 10 | ಶ್ರೀ ಸಂತೋಷ್, ವಾರ್ಡ್ ವೆಲ್‌ಫೇರ್ ಕಮಿಟಿ ಸದಸ್ಯರು |
| 11 | ಶ್ರೀ ರಂಗನಾಥ್, ಬೆಸ್ಕಾಂ, ಜೆ.ಇ |
| 12 | ಶ್ರೀ ಸಿದ್ದರಾಜು, ಬಿ.ಡಬ್ಲ್ಯೂ.ಎಸ್‌ಎಸ್‌ಬಿ |
| 13 | ಶ್ರೀ ಈಶ್ವರ್ ಗೌಡ, ವಾರ್ಡ್ ಅಧ್ಯಕ್ಷ |
| 14 | ಶ್ರೀ ಗೋವಿಂದರಾಜು, ಆರೋಗ್ಯ ಪರಿವೀಕ್ಷಕರು |

ಸದರಿ ಸಭೆಯಲ್ಲಿ ಈ ಕೆಳಕಂಡ ವಿಷಯಗಳ ಬಗ್ಗೆ ಚರ್ಚಿಸಲಾಯಿತು.

- ಶ್ರೀ ಚಂದ್ರಶೇಖರ್.ಹೆಚ್.ಆರ್ ನೋಡಲ್ ಅಧಿಕಾರಿಗಳು ವಾರ್ಡ್-76 ಇವರು ಸಭೆಯನ್ನು ಮುಂದುವರೆಸಲು ಸೂಚಿಸಿದರು.

ಆರೋಗ್ಯ ಇಲಾಖೆ :

- ಸಭೆಯಲ್ಲಿ ಹಾಜರಿದ್ದ ಆರೋಗ್ಯಾಧಿಕಾರಿಗಳು ವಾರ್ಡ್-76ರ ಗಾಯತ್ರಿನಗರ ವ್ಯಾಪ್ತಿಯಲ್ಲಿ ಕೋವಿಡ್-19ನ 14 ಪ್ರಕರಣಗಳು ದಾಖಲಾಗಿವೆ ಎಂದು ತಿಳಿಸಿದರು. ಹಾಗೂ ಯಾವುದೇ ಮೈಕ್ರೋಕಂಟೈನ್‌ಮೆಂಟ್ ಜೋನ್ ಇರುವುದಿಲ್ಲವೆಂದು ತಿಳಿಸಿದರು. 3 ಪ್ರಕರಣಗಳ ಮೇಲೆ ಇದ್ದರೆ ಸೀಲ್‌ಡೌನ್ ಮಾಡಲಾಗುವುದೆಂದು ತಿಳಿಸಿದರು. ಕೋವಿಡ್-19ನ ಕಲಿಮಾರಿಯಮ್ಮ ದೇವಸ್ಥಾನದ ರಸ್ತೆಯಲ್ಲಿ 2 ಪ್ರಕರಣಗಳು ಲಕ್ಷ್ಮೀನಾರಾಯಣಪುರದಲ್ಲಿ 2 ಪ್ರಕರಣಗಳು ಡಿ ಬ್ಲಾಕ್‌ನಲ್ಲಿ ಉಳಿದ ಪ್ರಕರಣಗಳು ಇವೆ ಎಂದು ತಿಳಿಸಿದರು. ಹಾಗೂ ಆಸ್ಪತ್ರೆಯಲ್ಲಿ ಕಿಟ್‌ಗಳು ಮತ್ತು ಔಷಧಿಗಳು ಇವೆ ಎಂದು ತಿಳಿಸಿದರು. ಆರೋಗ್ಯ ಇಲಾಖೆಯ ಸಿಬ್ಬಂದಿಗಳಿಗೆ ಹೋಟೆಲ್‌ನಲ್ಲಿ ಕೆಲಸ ನಿರ್ವಹಿಸುತ್ತಿರುವ ಸಿಬ್ಬಂದಿಗಳಿಗೆ ಕೋವಿಡ್-19ನ ಪರೀಕ್ಷೆ ನಡೆಸುವಂತೆ ಸಭೆಯಲ್ಲಿ ಸೂಚಿಸಲಾಯಿತು.

ಆರೋಗ್ಯ ಇಲಾಖೆ (ಘನತ್ಯಾಜ್ಯ):

- ಸಭೆಯಲ್ಲಿ ಹಾಜರಿದ್ದ ಆರೋಗ್ಯಾಧಿಕಾರಿಗಳು ವಾರ್ಡ್-76ರ ವ್ಯಾಪ್ತಿಯಲ್ಲಿ ಬರುವ ನಾಗಪ್ಪ ಬ್ಲಾಕ್, ಮತ್ತು ಎಲ್.ಎನ್ ಪುರಂದಲ್ಲಿ ಬರುವ ಕರ್ನ್ಸವೆನ್ಸಿಗಳಲ್ಲಿ ಸ್ವಚ್ಚತೆಯನ್ನು ಮಾಡಲಾಗಿದೆ ಎಂದು ತಿಳಿಸಿದರು ಹಾಗೂ ಕರ್ನ್ಸವೆನ್ಸಿಯ ಪಕ್ಕದಲ್ಲಿ ಇರುವ ಮನೆಗಳಿಗೆ ನೋಟಿಸ್ ಜಾರಿ ಮಾಡುವಂತೆ ಸೂಚಿಸಲಾಯಿತು. ಆರೋಗ್ಯಾಧಿಕಾರಿಗಳು ಮನೆ ಮನೆಗೆ ಹೋಗಿ ಕರ್ನ್ಸವೆನ್ಸಿಯಲ್ಲಿ ಕಸವನ್ನು ಹಾಕದಂತೆ ಸೂಚಿಸಲಾಗಿದೆ ಎಂದು ತಿಳಿಸಿದರು. 2ನೇ ಕ್ರಾಸ್‌ನ ಕರ್ನ್ಸವೆನ್ಸಿಯಲ್ಲಿ ಸ್ವಚ್ಚತೆಯನ್ನು ಮಾಡುವಂತೆ ಸೂಚಿಸಲಾಯಿತು. ಪೌರಕಾರ್ಮಿಕರಿಗೆ ಕೋವಿಡ್-19ನ ಪರೀಕ್ಷೆ ನಡೆಸುವಂತೆ ಸಭೆಯಲ್ಲಿ ಸೂಚಿಸಲಾಯಿತು.

ಮಾರ್ಷಲ್‌ರವರು:

- ಸಭೆಯಲ್ಲಿ ಹಾಜರಿದ್ದ ಮಾರ್ಷಲ್ ರವರಿಗೆ ಕೋವಿಡ್-19ನ ಪ್ರಕರಣಗಳು ಜಾಸ್ತಿಯಾಗುತ್ತಿದ್ದು, ಮಾಸ್ಕ್ ಧರಿಸದವರಿಗೆ (ಹಾಕದವರಿಗೆ) ದಂಡ ವಿಧಿಸುವಂತೆ ಸಭೆಯಲ್ಲಿ ಸೂಚಿಸಲಾಯಿತು. ಹೆಚ್ಚು ಜನ ಸಂದಣಿ ಇರುವ ಕಡೆ ಮಾರುಕಟ್ಟೆಗಳಲ್ಲಿ ಮಾಸ್ಕ್ ಧರಿಸದವರಿಗೆ ದಂಡ ವಿಧಿಸುವಂತೆ ಸೂಚಿಸಲಾಯಿತು.

**BWSSB ಇಲಾಖೆ:**

- ಸಭೆಯಲ್ಲಿ ಹಾಜರಿದ್ದ BWSSB ಅಧಿಕಾರಿಗಳು ವಾರ್ಡ್-76ರ ಗಾಯತ್ರಿನಗರ ಸಿ ಬ್ಲಾಕ್ ಮತ್ತು ಮಾರುತಿ ಎಕ್ಸ್‌ಟೆನ್ಸ್‌ಗಳಲ್ಲಿ ನೀರು ಸರಬರಾಜು ಪೈಪ್‌ಗಳನ್ನು ಅಳವಡಿಸಲಾಗುತ್ತಿದೆ ಎಂದು ತಿಳಿಸಿದರು. ನೀರು ಸರಬರಾಜು ಪೈಪ್‌ಗಳನ್ನು ಅಳವಡಿಸಿದ ನಂತರ ರೆಸ್ಟೋರೆಶನ್ ಮಾಡುವಂತೆ ಸಭೆಯಲ್ಲಿ ಸೂಚಿಸಲಾಯಿತು.

~~BESCOM ಇಲಾಖೆ:~~

**BESCOM ಇಲಾಖೆ:**

- ಸಭೆಯಲ್ಲಿ ಹಾಜರಿದ್ದ bescom ಅಧಿಕಾರಿಗಳು ಯಾವುದೇ ದೂರುಗಳಿಲ್ಲವೆಂದು ತಿಳಿಸಿದರು.

ಕಾಮಗಾರಿ ಇಲಾಖೆ :

- ವಾರ್ಡ್‌-76ರ ಗಾಯತ್ರಿನಗರ ವ್ಯಾಪ್ತಿಯಲ್ಲಿ ರಸ್ತೆಯ ಗುಂಡಿಗಳನ್ನು ಮುಚ್ಚಲಾಗುತ್ತಿದೆ ಎಂದು ತಿಳಿಸಿದರು. ರಸ್ತೆ ಗುಂಡಿಗಳನ್ನು ಬೇಗ ಮುಚ್ಚುವಂತೆ ಸೂಚಿಸಲಾಯಿತು.

ಮಾನ್ಯ ಅಧ್ಯಕ್ಷರ ಅಪ್ಪಣೆ ಮೇರೆಗೆ ಕಾರ್ಯದರ್ಶಿಯವರು ವಂದಾನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಿದರು.

ಕಾರ್ಯದರ್ಶಿ,
ಸಹಾಯಕ ಅಭಿಯಂತರರು, ವಾರ್ಡ್‌-76
ಗಾಯತ್ರಿನಗರ, ಮಲ್ಲೇಶ್ವರಂ ಉಪ ವಿಭಾಗ, ಬಿಬಿಎಂಪಿ

ಅಧ್ಯಕ್ಷರು
ನೋಡಲ್ ಅಧಿಕಾರಿಗಳು, ವಾರ್ಡ್‌-76
ಮಲ್ಲೇಶ್ವರಂ ಉಪ ವಿಭಾಗ, ಬಿಬಿಎಂಪಿ